ಪ್ರಧಾನ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ.,
ಕುಂದಾಪುರ

ಓ.ಎಸ್.ನಂಬ್ರಃ 390/2018
ಡಿಡಬ್ಲ್ಯೂ : 2

ದಿನಾಂಕಃ 29-10-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಪ್ರತಿವಾದಿ ಪರವಾಗಿ ಶ್ರೀ ಎಮ್ ಜೆ ಎಸ್ ವಕೀಲರಿಂದ

ನಾನು ಈ ಕೇಸಿನ : ವಿಲ್ ನ ಸಾಕ್ಷಿ

ನಾನು ನನ್ನ ಪ್ರಮಾಣ ಪತ್ರವನ್ನು ಈ ದಿವಸ ಈ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದನ್ನು ನಾನು ಓದಿ ಹೇಳಿ ಕೇಳಿ ಅರ್ಥೈಸಿಕೊಂಡು ಬೆರಳಚ್ಚು ಮಾಡಿಸಿರುತ್ತೇನೆ ಅದರಲ್ಲಿರುವ ಎಲ್ಲಾ ಮಾಹಿತಿಗಳು ಸತ್ಯವಾಗಿದ್ದು, ಅದರಲ್ಲಿ ನನ್ನ ಸಹಿ ಇರುತ್ತದೆ. ಅದನ್ನು ನನ್ನ ಮುಖ್ಯ ವಿಚಾರಣೆಯನ್ನಾಗಿ ಪರಿಗಣಿಸಬೇಕಾಗಿ ಕೇಳಿಕೊಳ್ಳುತ್ತೇನೆ.

ಸಾಕ್ಷಿ ತನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ವಿಲ್ ನ್ನು ಚಂದು ಹಾಂಡ್ತಿರವರು ಅವರ ಮಗಳು ಅಕ್ಕಯ್ಯರವರಿಗೆ ಮಾಡಿಕೊಟ್ಟಿರುತ್ತಾರೆ. ನಾನು ಆ ವಿಲ್ ನ್ನು ನೋಡಿರುತ್ತೇನೆ ಹಾಗೂ ಅದಕ್ಕೆ ಸಹಿ ಮಾಡಿರುತ್ತೇನೆ ಎಂದು ನುಡಿದು, ಸದರಿ ವಿಲ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಸಹಿಯನ್ನು ನಿ.ಡಿ.7(ಎ) ಎಂದು ಹಾಗೂ ಚಂದು ಹಾಂಡ್ತಿಯವರ ಹೆಬ್ಬೆಟ್ಟಿನ ಗುರುತನ್ನು ನೋಡಿ ತನ್ನ ಮುಂದೆ ಹೆಬ್ಬೆಟ್ಟಿನ ಗುರುತನ್ನು ಹಾಕಿರುತ್ತಾರೆ ಎಂದು ನುಡಿದು ನಿ.ಡಿ. 7(ಬಿ) ಎಂದು ಗುರುತಿಸಲಾಯಿತು. ನನ್ನ ಮುಂದೆ ಇನ್ನೊಬ್ಬ ಸಾಕ್ಷಿದಾರರಾದ ಚೆಕ್ಕಮ್ಮ ಶೆಡ್ತಿಯವರು ಸಹಿ ಮಾಡಿರುತ್ತಾರೆ ಎಂದು ನುಡಿದಿರುತ್ತಾರೆ. ಸದರಿ ವಿಲ್ ನ್ನು ನಾಗಭೂಷಣರವರು ತಯಾರು ಮಾಡಿದ್ದು ಅವರು ಸಹಿ ಮಾಡಿರುತ್ತಾರೆ ಎಂದು ನುಡಿದು ಅವರ ಸಹಿಯನ್ನು ನಿ.ಡಿ. 7(ಸಿ) ಎಂದು ಗುರುತಿಸಿರುತ್ತಾರೆ.

ಮರು ವಿಚಾರಣೆ - ಇಲ್ಲ.

ವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು

ಓ.ಹೇ.ಕೇ.ಸ.ಇದೆ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಲಾಗಿದೆ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಕುಂದಾಪುರ